**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 9/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.05**

**ದಿನಾಂಕಃ 23.10.2025** **ಸಿಡಬ್ಲ್ಯೂ.04**

| | |
|---|---|
| ಹೆಸರು | ಹನುಮಂತಪ್ಪ |
| ತಂದೆ ಹೆಸರು | ತಿಪ್ಪೇಸ್ವಾಮಿ |
| ವಯಸ್ಸು | 43 ವರ್ಷ |
| ಉದ್ಯೋಗ | ಕೂಲಿ ಕೆಲಸ |
| ವಾಸ ಸ್ಥಳ | ಹರಿಹರ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಸಾಕ್ಷಿಗೆ ಒಂದು ದಾಖಲೆ ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇದೆ ಎಂದು ಗುರುತಿಸಿರುತ್ತಾರೆ, ಸದರಿ ದಾಖಲೆ ಪಂಚರಿಗೆ ನೀಡಿದ ನೋಟೀಸ್ ಆಗಿದ್ದು ಅದನ್ನು ಈಗಾಗಲೇ ನಿಪಿ.8 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.8(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆ ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇದೆ ಎಂದು ಗುರುತಿಸಿರುತ್ತಾರೆ, ಸದರಿ ದಾಖಲೆ ಮೊಬೈಲ್ ಅಮಾನತ್ತು ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ.9 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.9(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ 2 ಛಾಯಾಚಿತ್ರಗಳನ್ನು ತೋರಿಸಲಾಗಿ ಸದರಿ ಛಾಯಾಚಿತ್ರಗಳಲ್ಲಿ ತಾವು ಇರುವುದಾಗಿ ಗುರುತಿಸಿರುತ್ತಾರೆ ಅವುಗಳನ್ನು ಈಗಾಗಲೇ ನಿಪಿ.10 ಮತ್ತು 11 ಎಂದು ಗುರುತಿಸಲಾಗಿದೆ. ಸದರಿ ಸಹಿಗಳನ್ನು ಸುಮಾರು 2 ವರ್ಷಗಳ ಹಿಂದೆ ಹರಿಹರ ಗ್ರಾಮಾಂತರ ಠಾಣೆಯಲ್ಲಿ ಮಾಡಿರುತ್ತೇನೆ ಯಾವ ಕಾರಣಕ್ಕೆ ಎಂದು ಗೊತ್ತಿರುವುದಿಲ್ಲ. ನಿಪಿ.10 ಮತ್ತು 11 ಛಾಯಾಚಿತ್ರಗಳನ್ನು ಯಾರ ಕಾರಣಕ್ಕೆ ತೆಗೆದಿರುತ್ತಾರೆ ಎಂದು ಗೊತ್ತಿರುವುದಿಲ್ಲ. ನಿಪಿ.9 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ01.10.2023 ರಂದು ಹರಿಹರ ಗ್ರಾಮಾಂತರ ಠಾಣೆ ಪೋಲೀಸರು ನನ್ನನ್ನು ಮತ್ತು ಚಾಸಾ.3 ರವರನ್ನು ಕರೆಸಿ ಪ್ರಕರಣದ ವಿದ್ಯಮಾನ ತಿಳಿಸಿ ಮೊಬೈಲ್ ಜಪ್ತು ಪಡಿಸಿಕೊಳ್ಳಲು ಪಂಚನಾಮೆಗೆ ಸಹಕರಿಸಬೇಕು ಎಂದು ಕೇಳಿಕೊಂಡ ಮೇರೆಗೆ ನಾವು ಒಪ್ಪಿ ಸಹಿ ಮಾಡಿರುತ್ತೇವೆ ಎಂದರೆ ಗೊತ್ತಿಲ್ಲ. ನನ್ನ ಮತ್ತು ಚಾಸಾ.3 ರವರ ಸಮಕ್ಷಮ ಕಪ್ಪು ನೀಲಿ ಬಣ್ಣದ ಮತ್ತು ಕೆಂಪು ಬಣ್ಣದ

ಕವರ್ ಹೊಂದಿದ One plus nord CE2 Lite 5G, Model CPH 2381 ನ್ನು ಪಂಚನಾಮೆ ಜರುಗಿಸಿ ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ಬೆಳಗ್ಗೆ 11 ರಿಂದ 11.45 ರವರೆಗೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಂದರ್ಭದಲ್ಲಿ ನಿಪಿ.10 ಮತ್ತು 11 ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಆರ್ ಜಿ ಬಿ ವಕೀಲರಿಂದಃ ಇರುವುದಿಲ್ಲ ಎಂದು ನುಡಿದಿತ್ತಾರೆ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ